# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 241 (1833) |
| ಸದಸ್ಯರ ಹೆಸರು | ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | **22-03-2021** |
| ಉತ್ತರಿಸಬೇಕಾದ ಸಚಿವರು | ಉಪ ಮುಖ್ಯಮಂತ್ರಿ (ಉನ್ನತ ಶಿಕ್ಷಣ) |

| | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆ ನಿರ್ವಹಿಸುತ್ತಿರುವಾಗಲೇ ಮರಣ ಹೊಂದಿದ ಸಂದರ್ಭದಲ್ಲಿ ಅವರ ಕುಟುಂಬಸ್ಥರಿಗೆ ಅನುಕಂಪದ ಹುದ್ದೆಯನ್ನು ನೀಡುವ ಬಗ್ಗೆ ಪ್ರಸಕ್ತ ಇರುವ ನಿಯಮ ಮತ್ತು ಅವಕಾಶಗಳೇನು; | ಸರ್ಕಾರದ ಪತ್ರ ಸಂಖ್ಯೆ:ಇಡಿ/246/ಯು.ಪಿ.ಸಿ/2001, ದಿನಾಂಕ:01-02-2002ರಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆಯಲ್ಲಿದ್ದಾಗ ಮರಣ ಹೊಂದಿದ ನೌಕರನ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲವೆಂದು ತಿಳಿಸಲಾಗಿದೆ. ಅಲ್ಲದೇ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/551/ಯುಪಿಸಿ/99, ದಿನಾಂಕ:07-08-2003ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು-2003ರ ನಿಯಮ 8(2)ರಲ್ಲಿ "Vacant and unapproved post of Non-teaching Staff as on 01-03-2001 shall be permanently unaided. Any vacancies in the Non-teaching post whichever as arisen after 01-03-2001 on account of retirement, resignation, removal, dismissal and death etc., are to remain permanently unaided. Such Vacancies which are unaided shall be filled by the management and salary and other allowance shall be paid from its own resources". ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಅವಕಾಶವಿರುವುದಿಲ್ಲ.<br><br>ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:01.03.2001ರ ನಂತರ ತೆರವಾಗುವ ಬೋಧಕೇತರರ ಹುದ್ದೆಗಳು ಶಾಶ್ವತವಾಗಿ ಅನುದಾನರಹಿತವೆಂದು ಪರಿಗಣಿಸಲ್ಪಡುವುದರಿಂದ |
| ಆ) | ಉಳಿದೆಲ್ಲ ಇಲಾಖೆಗಳಲ್ಲಿ ಅನುಕಂಪದ ಆಧಾರದ ಮೇಲೆ ಉದ್ಯೋಗ ಕೊಡುವ ನಿಯಮವಿದ್ದು, ಅನುದಾನಿತ ಪದವಿ ಕಾಲೇಜುಗಳಲ್ಲಿ ಮಾತ್ರ ಅವಕಾಶ ಇಲ್ಲದಿರುವುದಕ್ಕೆ ಕಾರಣಗಳೇನು | |

| | | |
|---|---|---|
| | | ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಇ) | ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಹುದ್ದೆಯನ್ನು ನೀಡವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ಯಾವ ಕಾಲಮಿತಿಯೊಳಗೆ ಇಂತಹ ಹುದ್ದೆ ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು? | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/551/ಯುಪಿಸಿ/99, ದಿನಾಂಕ:07-08-2003ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು-2003ರ ನಿಯಮ 8(2)ರಲ್ಲಿ "Vacant and unapproved post of Non-teaching Staff as on 01-03-2001 shall be permanently unaided. Any vacancies in the Non-teaching post whichever as arisen after 01-03-2001 on account of retirement, resignation, removal, dismissal and death etc., are to remain permanently unaided. Such Vacancies which are unaided shall be filled by the management and salary and other allowance shall be paid from its own resources". ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಇಡಿ 42 ಯುಪಿಸಿ 2021**

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
**ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)**